CW.5 PW.2

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.841/2009

| | |
|---|---|
| ಸಾಕ್ಷಿದಾರರ ಹೆಸರು | ಮುತ್ತುನಾಯ್ಕ |
| ತಂದೆಯ ಹೆಸರು | ಮಾದ್ಯನಾಯ್ಕ |
| ವಯಸ್ಸು | 55 ವರ್ಷ |
| ವೃತ್ತಿ | ಖಾಸಗಿ ಕೆಲಸ |
| ವಿಳಾಸ | ಹೊಸದುರ್ಗ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 19.11.2025 |

**<u>ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-</u>**

ಆರೋಪಿಯನ್ನು ನಾನು ನೋಡಿರುವುದಿಲ್ಲ. ಅವರು ಯಾರೆಂದು ನನಗೆ ಗೊತ್ತಿರುವುದಿಲ್ಲ. ಚಾಸಾ-1 ರಿಂದ 4, ಚಾಸಾ 6 ರವರು ಗೊತ್ತಿರುವುದಿಲ್ಲ. ಚಾಸಾ-3 ರವರು ತೀರಿಕೊಂಡಿರುತ್ತಾರೆ.

ಪೋಲೀಸರು ಸುಮಾರು ವರ್ಷಗಳ ಹಿಂದೆ ಒಂದು ಸಹಿ ಮಾಡಲು ಹೇಳಿದರು ನಾನು ಹಾಕಿರುತ್ತೇನೆ. ಅದು ಯಾವ ಕಾರಣಕ್ಕೆ ಎಂದು ನನಗೆ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 01.01.2009 ರಂದು ಕನಕಪುರ ತಾಲ್ಲೂಕು ಕೋಡಿಹಳ್ಳಿ ಹೋಬಳಿ ಹೊಸದುರ್ಗ ಗ್ರಾಮದ ಬಸ್ ನಿಲ್ದಾಣದ ಬಳಿ ಪೋಲೀಸರು ನನ್ನ ಹಾಗೂ ಚಾಸಾ 2 ಹಾಗೂ ಚಾಸಾ-4 ರವರ ಸಮಕ್ಷಮ ರಾತ್ರಿ 8 ರಿಂದ 8.45 ಗಂಟೆಯವರೆಗೂ ಈಗ ವಿವರವಾಗಿ ಹೇಳಿದಂತೆ ಮಹಜರ್ ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 01.01.2009 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ಹೇಳಿಕೆಯನ್ನು ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ಗೊತ್ತಿದ್ದರೂ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**